**ಸಾಕ್ಷಿಗೆ ದಿನಾಂಕ:07-07-2026 ರಂದು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**:: ಪಾಟೀ ಸವಾಲು :: ಪ್ರತಿವಾದಿ ಪರ ಶ್ರೀ. TRS ವಕೀಲರಿಂದ ::**

2 ನೇ ಪ್ರತಿವಾದಿ ಹೆಸರು ನನಗೆ ಈಗ ನೆನಪಿಲ್ಲ. ದಾವಾ ಶೆಡ್ಯೂಲ್ ಸ್ವತ್ತಿನ ಅಸೆಸ್ಮೆಂಟ್ ನಂಬರ್ ನನಗೆ ಈಗ ನೆನಪಿಲ್ಲ. ದಾವಾ ಶೆಡ್ಯೂಲ್ ಸ್ವತ್ತಿನ ವಿಸ್ತೀರ್ಣ 12 X 28 ಅಡಿ ಆಗಿರುತ್ತದೆ. ದಾವಾ ಶೆಡ್ಯೂಲ್ ಸ್ವತ್ತು ಪ್ರತಿವಾದಿಗಳ ಖರೀದಿಯ ಸ್ವತ್ತು ಆಗಿರುತ್ತದೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಸದರಿ ಸ್ವತ್ತನ್ನು ಪ್ರತಿವಾದಿಗಳು ಅವರ ಮಕ್ಕಳ ಹೆಸರಿಗೆ ಬಿಟ್ಟು ಕೊಟ್ಟಿದ್ದು ಅವರಿಂದ ನಾನು ಖರೀದಿ ಮಾಡಿರುತ್ತೇನೆ ಎಂದು ನುಡಿಯುತ್ತಾರೆ. ದಾವಾ ಶೆಡ್ಯೂಲ್ ಸ್ವತ್ತು ಸಂತೋಷ್ ರವರಿಗೆ ಪ್ರತಿವಾದಿಗಳು ಮಾಡಿಕೊಟ್ಟ ದಾನಪತ್ರದ ಅಡಿಯಲ್ಲಿ ಬಂದಿರುತ್ತದೆ ಎಂದು ನಾನು ತಿಳಿದುಕೊಂಡಿರುತ್ತೇನೆ. ನಾನು ಹೇಳುತ್ತಿರುವ ದಾನ ಪತ್ರವನ್ನು ನಾನು ಓದಿರುವುದಿಲ್ಲ. ನನಗೆ ಕನ್ನಡ ಓದಲು ಮತ್ತು ಬರೆಯಲು ಬರುವುದಿಲ್ಲ. ಸಂತೋಷ್ ರವರ ಜೊತೆ ದಾವಾ ಶೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ನನ್ನ ಮಗ ಜೈನುದ್ದೀನ್ ಎನ್ನುವವರು ವ್ಯವಹಾರ ಮಾಡಿರುತ್ತಾರೆ.

ಪ್ರತಿವಾದಿಗಳು ಸಂತೋಷ್ ರವರ ಹೆಸರಿಗೆ ದಾನಪತ್ರ ಮಾಡಿಕೊಳ್ಳುವ ಪೂರ್ವದಲ್ಲಿ ಸುಮಾರು 29 ಲಕ್ಷ ರೂಪಾಯಿ ವೈಯಕ್ತಿಕ ಸಾಲವನ್ನು ಮಾಡಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸಂತೋಷ್ ಕುಮಾರ್ ರವರ ಹೆಸರಿಗೆ ದಾವಾ ಶೆಡ್ಯೂಲ್ ಸ್ವತ್ತನ್ನು ದಾನಪತ್ರದ ಅಡಿ ಬಿಡುವ ಸಮಯದಲ್ಲಿ ಸದರಿ ಸಂತೋಷ್ ರವರು ಪ್ರತಿವಾದಿಗಳು ಮಾಡಿಕೊಂಡಿದ್ದ 29 ಲಕ್ಷ ಸಾಲವನ್ನು ತಿರಿಸುವುದಾಗಿ ಒಪ್ಪಿಕೊಂಡಿದ್ದರು ಎಂದರೆ ನನಗೆ ಗೊತ್ತಿಲ್ಲ. ಸದರಿ ಸಾಲ ಮರು ಪಾವತಿಯ ನಿಬಂಧನೆಯ ಮೇರೆಗೆ ಪ್ರತಿವಾದಿಗಳು ಸಂತೋಷ್ ಕುಮಾರ್ ರವರ ಹೆಸರಿಗೆ ದಾನಪತ್ರ ಮಾಡಿಕೊಟ್ಟಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸಾಕ್ಷಿಯು ಮುಂದುವರೆದು ಸಂತೋಷ್ ಕುಮಾರ್ ರವರು ನನಗೆ ದಾವಾ ಶೆಡ್ಯೂಲ್ ಸ್ವತ್ತನ್ನು ಮಾರಾಟ ಮಾಡುವಾಗ ಪ್ರತಿವಾದಿಗಳಿಗೆ ಅದರ ಮೇಲೆ ಯಾವುದೇ ಹಕ್ಕು ಇರುವುದಿಲ್ಲ ಎಂದು ತಿಳಿಸಿರುತ್ತಾರೆ ಎಂದು ನುಡಿಯುತ್ತಾರೆ. ದಾನ ಪತ್ರ ಮಾಡಿಕೊಟ್ಟ ನಂತರದಲ್ಲಿ ಸಂತೋಷ್ ಕುಮಾರ್ ರವರು ಪ್ರತಿವಾದಿಗಳ ಸಾಲವನ್ನು ತೀರಿಸದ ಕಾರಣ ಹಾಗೂ ಅವರ ಯೋಗಕ್ಷೇಮವನ್ನು

ನೋಡಿಕೊಳ್ಳದ ಕಾರಣ ಸದರಿ ದಾನಪತ್ರದ ವಿರುದ್ದ ಅಸಲು ದಾವಾ 26/2021 ರಂತೆ ದಾವೆ ಸಲ್ಲಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ದಾವೆಯಲ್ಲಿ ಪಕ್ಷಗಾರರು 2021 ನೇ ಸಾಲಿನಲ್ಲಿ ರಾಜೀ ಡಿಕ್ರಿ ಮಾಡಿಕೊಂಡಿದ್ದು ಸದರಿ ರಾಜೀ ಡಿಕ್ರಿಯಲ್ಲಿ ಏನು ಬರೆದಿರುತ್ತದೆ ಎಂದು ನನಗೆ ಗೊತ್ತಿಲ್ಲ. ಸದರಿ ರಾಜೀ ಡಿಕ್ರಿಯಲ್ಲಿ ಸಂತೋಷ್ ಕುಮಾರ್ ರವರು ಪ್ರತಿವಾದಿಗಳ ಸಾಲ ತಿರಿಸದಿದ್ದರೆ ಮತ್ತು ಅವರ ಯೋಗಕ್ಷೇಮ ನೋಡಿಕೊಳ್ಳದಿದ್ದರೇ ದಾನ ಪತ್ರದ ಅಡಿ ಬಂದಿರುವ ಸ್ವತ್ತುಗಳನ್ನು ಮಾರಾಟ ಮಾಡುವುದಿಲ್ಲ ಎಂದು ಒಪ್ಪಿಕೊಂಡಿದ್ದರು ಎಂದರೆ ನನಗೆ ಗೊತ್ತಿಲ್ಲ. ಆ ರೀತಿ ಸಂತೋಷ್ ಕುಮಾರ್ ರವರು ನ್ಯಾಯಾಲಯದಲ್ಲಿ ಮಾಡಿಕೊಂಡ ಡಿಕ್ರಿಯಲ್ಲಿ ಒಪ್ಪಿಕೊಂಡಿದ್ದ ಕಾರಣ ದಾವಾ ಶೆಡ್ಯೂಲ್ ಸ್ವತ್ತನ್ನು ನಮಗೆ ಮಾರಾಟ ಮಾಡಲು ಅವರಿಗೆ ಯಾವುದೇ ಹಕ್ಕು ಇರಲಿಲ್ಲ ಎಂದರೆ ಸರಿಯಲ್ಲ. ನಾನು ಈ ದಾವೆ ಹೂಡುವ ಸಮಯದಲ್ಲಿ ನನ್ನ ವಕೀಲರಿಗೆ ನನ್ನ ದಾವಾ ಶೆಡ್ಯೂಲ್ ಸ್ವತ್ತಿನ ಮನೆಯನ್ನು ನನಗೆ ಬಿಡಿಸಿಕೊಡುವಂತೆ ನನ್ನ ವಕೀಲರಿಗೆ ಮಾಹಿತಿ ನೀಡಿದ್ದೆ ಎಂದರೆ ಸರಿ. ಪ್ರಸ್ತುತ ದಾವೆಯಲ್ಲಿ ನನ್ನ ಪರವಾಗಿ ದಿಃ 02.06.2025 ರಂದು ತಾತ್ಕಾಲಿಕ ನಿರ್ಬಂಧಕಾಜ್ಞೆ ಆದೇಶ ಆಗಿರುತ್ತದೆ ಎಂದರೆ ಸರಿ. ಸದರಿ ಆದೇಶದ ಪ್ರತಿಯನ್ನು ಪಡೆದು ನಾನು ಮತ್ತು ನನ್ನ ಮಗ ಪೊಲೀಸರ ಜೊತೆ ದಾವಾ ಶೆಡ್ಯೂಲ್ ಸ್ವತ್ತಿನಲ್ಲಿ ಇರುವ ಮನೆಯ ಒಳಗೆ ಹೋಗಿರುತ್ತೇವೆ ಎಂದರೆ ಸರಿ. ನ್ಯಾಯಾಲಯದ ಆದೇಶವನ್ನು ದುರುಪಯೋಗಪಡಿಸಿಕೊಂಡು ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನವನ್ನು ನಾವು ಪಡೆದುಕೊಂಡಿರುತ್ತೇವೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ನ್ಯಾಯಾಲಯದ ಆದೇಶದ ಮೇರೆಗೆ ನಾವು ಸದರಿ ಮನೆಗೆ ಹೋಗಿರುತ್ತೇವೆ ಎಂದು ನುಡಿಯುತ್ತಾರೆ. ದಿಃ 02.06.2025ರ ಆದೇಶದ ವಿರುದ್ದ ಪ್ರತಿವಾದಿಗಳು ಮೇಲ್ಮನವಿ ಸಲ್ಲಿಸಿರುತ್ತಾರೆ ಎಂದರೆ ಸರಿ. ಆದಕಾರಣ ನಾನು ಈ ದಾವೆಯಲ್ಲಿ ಕೇಳಿರುವ ಪರಿಹಾರ ಅರ್ಹಳಾಗಿರುವುದಿಲ್ಲ ಎಂದರೆ ಸರಿ. ಸುಳ್ಳು ಕತೆ ಕಟ್ಟಿ ಸುಳ್ಳು ದಾವೆಯನ್ನು ಹೂಡಿರುತ್ತೇನೆ ಎಂದರೆ ಸರಿಯಲ್ಲ. ದಾವಾ ಹೂಡುವ ಸಮಯದಲ್ಲಿ ನಾನು ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿ ಇಲ್ಲದಿದ್ದರೂ ಸುಳ್ಳು ಕತೆ ಕಟ್ಟಿ ಸುಳ್ಳು ದಾವೆಯನ್ನು ಹೂಡಿರುತ್ತೇನೆ ಎಂದರೆ ಸರಿಯಲ್ಲ. ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**:: ಮರು ವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸ ಇ ಎ ಒ

sd/-

ಪ್ರಧಾನ ಸಿ.ಜೆ ಮತ್ತು ಹೆ. ಜೆ.ಎಂ.ಎಫ್.ಸಿ

ತರೀಕೆರೆ.

ಸಾಕ್ಷಿಯ ಸಹಿ: